**<u>ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ</u>**
**<u>ಜೇವರ್ಗಿ</u>**

**<u>ಸಿಸಿ ನಂ.79/2022</u>**

**<u>ಚಾಸಾ-1 /ಪಿಡಬ್ಲೂ-1</u>**

| | |
|---|---|
| **ಹೆಸರು** | ಸಲೀಮಾಬೇಗಂ |
| **ಗಂಡನ ಹೆಸರು** | ಹುಸೇನಬಾಷಾ |
| **ವಯಸ್ಸು** | 40 ವರ್ಷ |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ದೇಸುಣಗಿ |

**<u>ದಿನಾಂಕ 17.06.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭೀಯೋಜಕರಿಂದ:</u>**

ಚಾಸಾ-4 ನನ್ನ ಗಂಡ. ಚಾಸಾ-5, 6 ನನಗೆ ಗೊತ್ತು. ಆರೋಪಿಗಳು ನನ್ನ ಸಂಬಂಧಿಕರು.

ನನ್ನ ಮತ್ತು ಆರೋಪಿಗಳ ನಡುವೆ ಯಾವುದೇ ಜಗಳ ಆಗಿರುವುದಿಲ್ಲ. ಆರೋಪಿತರು ನನಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಹಲ್ಲೆ ಮಾಡಿಲ್ಲ, ಅವಮಾನ ಮಾಡಿಲ್ಲ ಮತ್ತು ಜೀವ ಬೆದರಿಕೆ ಹಾಕಿಲ್ಲ. ನಾನು ಪೊಲೀಸರಿಗೆ ಯಾವುದೇ ದೂರು ನೀಡಿರುವುದಿಲ್ಲ. ನನ್ನ ಮತ್ತು ಆರೋಪಿಗಳ ನಡುವೆ ಬಾಯಿ ಮಾತಿನ ಜಗಳ ಆಗಿದ್ದು ನಾನು ಪೊಲೀಸ ಠಾಣೆಗೆ ಹೋದಾಗ ಪೊಲೀಸರು ಒಂದು ದಾಖಲೆ ಮೇಲೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಸದರಿ ದಾಖಲೆಯನ್ನು ನಾನು ಈಗ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿ ದೂರಿನಲ್ಲಿ ತನ್ನ ಸಹಿಯನ್ನು ಗುರುತಿಸಿರುವುದರಿಂದ ದೂರನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ದೂರಿನಲ್ಲಿ ಏನು ಬರೆದಿದೆ ಎನ್ನುವುದು ನನಗೆ ಗೊತ್ತಿಲ್ಲ. ಪೊಲೀಸರು ಸಹಿ ಮಾಡಲು ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಸ.ಸ.ಅರವರು ಅನುಮತಿಯುನ್ನ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**<u>ವಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ದಿನಾಂಕ 04.09.2021 ರಂದು ಮಧ್ಯಾಹ್ನ 2.00 ರ ಸುಮಾರಿಗೆ ದೇಸುಣಗಿ ಗ್ರಾಮದ ಕಿರಾಣಿ ಅಂಗಡಿ ಹತ್ತಿರ ಹೋಗುತ್ತಿದ್ದಾಗ ಕಿರಾಣಿ ಅಂಗಡಿ ಹಣ ಕೊಡುವ ವಿಚಾರವಾಗಿ ಆರೋಪಿತರು ನನ್ನೊಂದಿಗೆ ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. ಆರೋಪಿತರು ನನ್ನ ಕೈ ಹಿಡಿದು ಎಳೆದಾಡಿ ಕೈ ಮುಷ್ಟಿ ಹೊಟ್ಟೆಗೆ ಮತ್ತು ಕಪಾಳಕ್ಕೆ ಹೊಡೆದು ಜೀವ

ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ನಿಪಿ-1 ರಂತೆ ದೂರು ನೀಡಿದ್ದೇನೆ ಎಂದರೆ ಸರಿಯಲ್ಲ.

ದಿನಾಂಕ 27.09.2021 ರಂದು ಮುಂಜಾನೆ 9.30 ರಿಂದ 10.30 ಗಂಟೆಯವರೆಗೆ ನಾನು ತೋರಿಸಿದ ಘಟನಾ ಸ್ಥಳದಲ್ಲಿ ಪೊಲೀಸರು ಪಂಚರ ಸಮಕ್ಷಮ ಪಂಚನಾಮೆ ಜರುಗಿಸಿದರು ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿತರ ಜೊತೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ